ಇ) ಸದ್ಯದಲ್ಲಿ, ಧುಲ್ಕೇಡ್(ಇಂಡಿ)ನಲ್ಲಿ 33 ಕೆ.ವಿ. ಉಪ ವಿದ್ಯುತ್ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ.

ಈ) ಮೇಲೆ ಇದರಲ್ಲಿ ಕೊಟ್ಟಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಕೆ.ಜಿ.ಎಫ್.ನ ಗೋಲ್ಡನ್ ವ್ಯಾಲಿ ಎಜುಕೇಷನಲ್ ಟ್ರಸ್ಟ್ ಇಂಜಿನಿಯರಿಂಗ್ ಕಾಲೇಜಿನಿಂದ ಕ್ಯಾಪಿಟೇಷನ್ ಶುಲ್ಕದ ವಸೂಲಿ

3467 - ಶ್ರೀ ಎಂ. ಭಕ್ತವತ್ಸಲಂ (ಕೆ.ಜಿ.ಎಫ್): ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಜಿ.ಎಫ್.ನ ಗೋಲ್ಡನ್ ವ್ಯಾಲಿ ಎಜುಕೇಷನಲ್ ಟ್ರಸ್ಟ್ ಇಂಜಿನಿಯರಿಂಗ್ ಕಾಲೇಜಿನವರು ವಸೂಲು ಮಾಡುತ್ತಿರುವ ಕ್ಯಾಪಿಟೇಷನ್ ಶುಲ್ಕದ ಮೊತ್ತ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

ಅ) ಈ ವಿಷಯವು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಕೆ.ಜಿ.ಎಫ್.ನ ಅನುದಾನಿತ, ಅನುದಾನ ರಹಿತ, ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲ ಕಾರ್ಯನಿರ್ವಹಿಸುವವರ ವೇತನ

3466 - ಶ್ರೀ ಬಕ್ತವತ್ಸಲಂ (ಕೆ.ಜಿ.ಎಫ್): ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆ.ಜಿ.ಎಫ್. ವ್ಯಾಪ್ತಿಯಲ್ಲಿ ಬರುವ ಖಾಸಗಿ ಅನುದಾನಿತ, ಅನುದಾನರಹಿತ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪಾಧ್ಯಾಯರುಗಳಿಗೆ ಅವರು ನೇಮಕಾತಿಗೊಂಡ ದಿನಾಂಕದಿಂದ ವೇತನವನ್ನು ಪಾವತಿ ಮಾಡಲಾಗಿದೆಯೇ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು):

ಅ) ನಿಗಧಿಪಡಿಸಿದ ಸಮಯದಲ್ಲಿ ವೇತನವನ್ನು ಶಿಕ್ಷಕರುಗಳಿಗೆ ನೀಡಲಾಗುತ್ತಿದೆ.

ಹಸಿರು ಮತ್ತು ಕೇಸರಿ ಪಡಿತರ ಚೀಟಿಗಳನ್ನು ಜಾರಿಗೆ ತರುವುದು.

3405 - ಶ್ರೀ ಜೌಡ ರೆಡ್ಡಿ.(ಚಿಂತಾಮಣಿ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಗ್ರಾಮಗಳಲ್ಲಿರುವ ಬಡವರು ಹಾಗೂ ದುರ್ಬಲ ವರ್ಗದ ಜನರು ಆಹಾರ ಪದಾರ್ಥಗಳನ್ನು ಪಡೆಯಲು ಹಸಿರು ಹಾಗೂ ಕೇಸರಿ ಪಡಿತರ ಚೀಟಿಗಳನ್ನು ಎಂದಿನಿಂದ ಜಾರಿಗೆ ತರಲಾಯಿತು?

ಆ) ಶ್ರೀಮಂತರು ಹಾಗೂ ಆರ್ಥಿಕವಾಗಿ ಮುಂದುವರಿದ ಜನರಿಗೆ ಕಾನೂನು ಬಾಹಿರವಾಗಿ ಹಸಿರು ಹಾಗೂ ಕೇಸರಿ ಪಡಿತರ ಚೀಟಿಗಳನ್ನು ವಿತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಅಂತಹ ಪಡಿತರ ಚೀಟಿಗಳನ್ನು ರದ್ದುಪಡಿಸಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ?

ಈ) ಸುಮಾರು ಶೇಕಡ 50ರಷ್ಟು ಮಂದಿ ಬಡತನ ರೇಖೆಯಿಂದ ಕೆಳಮಟ್ಟದಲ್ಲಿರುವ ಗ್ರಾಮದ ಜನರಿಗೆ ಹಸಿರು ಹಾಗೂ ಕೇಸರಿ ಪಡಿತರ ಚೀಟಿಗಳನ್ನು ವಿತರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?